# Telephone Conversation between Prime Minister Shri Narendra Modi and Prime Minister of UK The Rt Hon Boris Johnson

January 05, 2021

## ಯುನೈಟೆಡ್ ಕಿಂಗ್ ಡಂ ನ ಪ್ರಧಾನಿ ಶ್ರೀ ಬೋರಿಸ್ ಜಾನ್ಸನ್ ಅವರೊಂದಿಗೆ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ದೂರವಾಣಿ ಮೂಲಕ ಸಮಾಲೋಚನೆ

**ಜನವರಿ 04, 2021**

ನವದೆಹಲಿ, ಜನವರಿ 05 2021 : ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ – ಯುನೈಟೆಡ್ ಕಿಂಗ್ ಡಂನ ಪ್ರಧಾನಿ ಶ್ರೀ ಬೋರಿಸ್ ಜಾನ್ಸನ್ ಅವರೊಂದಿಗೆ ದೂರವಾಣಿ ಮೂಲಕ ಸಮಾಲೋಚನೆ ನಡೆಸಿದರು.

ಗಣರಾಜ್ಯೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳುವಂತೆ ತಮಗೆ ಭಾರತ ನೀಡಿರುವ ಆಹ್ವಾನಕ್ಕೆ ಪ್ರಧಾನಿ ಶ್ರೀ ಬೋರಿಸ್ ಜಾನ್ಸನ್ ಅವರು ಧನ್ಯವಾದ ಅರ್ಪಿಸಿದ್ದಾರೆ. ಆದರೆ ಯುಕೆಯಲ್ಲಿ ಬದಲಾದ ಕೋವಿಡ್ 19 ಸಂಕಷ್ಟದ ಹಿನ್ನೆಲೆಯಲ್ಲಿ ತಾವು ಸಮಾರಂಭದಲ್ಲಿ ಪಾಲ್ಗೊಳ್ಳಲು ಸಾಧ್ಯವಾಗದ ಪರಿಸ್ಥಿತಿಗೆ ಅವರು ವಿಷಾದ ವ್ಯಕ್ತಪಡಿಸಿದ್ದಾರೆ. ಮುಂದಿನ ದಿನಗಳಲ್ಲಿ ತಾವು ಭಾರತಕ್ಕೆ ಭೇಟಿ ನೀಡಲು ಉತ್ಸುಕರಾಗಿರುವುದಾಗಿಯೂ ಪುನರುಚ್ಚರಿಸಿದ್ದಾರೆ.

ಈ ಸಂದರ್ಭದಲ್ಲಿ ;ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು, ಯುಕೆಯಲ್ಲಿನ ಅಸಾಧಾರಣ ಪರಿಸ್ಥಿತಿ ಅರ್ಥವಾಗುತ್ತದೆ. ತ್ವರಿತವಾಗಿ ಸಂಕ್ರಾಮಿಕ ನಿಯಂತ್ರಣಕ್ಕೆ ಬರಲಿ ಎಂದು ಶುಭ ಹಾರೈಸಿದ್ದಾರೆ. ಪರಿಸ್ಥಿತಿ ಸಹಜ ಸ್ಥಿತಿಗೆ ಬಂದ ನಂತರ ನಿಮ್ಮನ್ನು ಭಾರತದಲ್ಲಿ ಸ್ವಾಗತಿಸಲು ಕಾತರದಿಂದ ಕಾಯುತ್ತಿರುವುದಾಗಿಯೂ ಪ್ರಧಾನಮಂತ್ರಿ ಅವರು ತಿಳಿಸಿದ್ದಾರೆ.

ಈ ಸಂದರ್ಭಧಲ್ಲಿ ಉಭಯ ನಾಯಕರು ಜಗತ್ತಿನಲ್ಲಿ ಕೋವಿಡ್ 19 ಸೋಂಕಿಗೆ ಲಭ್ಯವಿರುವ ಲಸಿಕೆ ಸೇರಿದಂತೆ ಉಭಯ ದೇಶಗಳ ನಡುವೆ ನಡೆಯುತ್ತಿರುವ ಸಹಕಾರ ಕುರಿತು ಪ್ರಗತಿ ಪರಿಶೀಲನೆ ಮಾಡಿದರು. ಭಾರತ – ಯುಕೆ ನಡುವೆ ಬ್ರಿಕ್ಸಿಟ್ ನಂತರದ, ಕೋವಿಡ್ ಬಳಿಕದ ಪರಿಸ್ಥಿತಿ ಕುರಿತು ಉಭಯ ದೇಶಗಳ ಪಾಲುದಾರಿಕೆ, ಪರಸ್ಪರ ನಂಬಿಕೆ ಮತ್ತು ಸಮಗ್ರ ನೀಲನಕ್ಷೆಯೆಡೆಗೆ ಕಾರ್ಯನಿರ್ವಹಿಸಲು ಉಭಯ ನಾಯಕರು ಸಮ್ಮತಿಸಿದ್ದಾರೆ.

**ನವ ದೆಹಲಿ**

**ಜನವರಿ 04, 2021**

DISCLAIMER: This is an approximate translation. The original is available in English on MEA's website and may be referred to as the official press release.